ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ
KARNATAK UNIVERSITY DHARWAD
ಪರೀಕ್ಷಾ ವಿಭಾಗ
ಗೌಪ್ಯ ಶಾಖೆ, 2ನೇ ಮಹಡಿ, ಪರೀಕ್ಷಾ ಭವನ
EXAMINATION SECTION
Confidential Branch, 2nd Floor, Examination Bhavan

Azadi Ka Amrit Mahotsav

Website: www.kud.ac.in
e-mail: confidential@kud.ac.in
☎: (0836) 2215259

ನಂ.ಕವಿವಿ/ಪರೀಕ್ಷಾ-ಗೌಪ್ಯ/2025/ 534 ದಿನಾಂಕ : 01.09.2025

## ಸುತ್ತೋಲೆ

ಮಾನ್ಯ ಕುಲಪತಿಗಳ ಆದೇಶದ ಮೇರೆಗೆ ದಿನಾಂಕ:12.09.2025 ರಂದು ಮಧ್ಯಾಹ್ನ 2–00 ಗಂಟೆಯಿಂದ 4–00 ಗಂಟೆಯವರೆಗೆ ಸಮಾಜ ವಿಜ್ಞಾನ, ವ್ಯವಹಾರ ಅಧ್ಯಯನ ಹಾಗೂ ಶಿಕ್ಷಣಶಾಸ್ತ್ರ, ವಿಜ್ಞಾನ ವಿಷಯಗಳು ಹಾಗೂ ಕಲಾ, ವಾಣಿಜ್ಯಶಾಸ್ತ್ರ ಹಾಗೂ ಕಾನೂನು ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗಳು (ಪಾರ್ಟ 'ಎ' ಮತ್ತು 'ಬಿ') ಜರುಗಲಿದ್ದು, ಕೇಂದ್ರಿಕೃತವಾಗಿ ಅತ್ಯಂತ ಸುವ್ಯವಸ್ಥೆಯಲ್ಲಿ ಹಾಗೂ ಸುಗಮವಾಗಿ ಜರುಗಿಸುವ ನಿಟ್ಟಿನಲ್ಲಿ ಎಲ್ಲ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು ಹಾಗೂ ಸಂಬಂಧಿಸಿದ ಸಿಬ್ಬಂದಿಗಳು ಈ ಕೆಳಗಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

1. ಮಾನ್ಯ ಕುಲಪತಿಗಳ ಆದೇಶದ ಮೇರೆಗೆ ಕಲಾ/ವಾಣಿಜ್ಯ ಹಾಗೂ ಕಾನೂನು ವಿಷಯಗಳಿಗೆ ಸಂಬಂಧಿಸಿದ ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗಳನ್ನು ಡಾ.ಆರ್.ಸಿ. ಹಿರೇಮಠ, ಕನ್ನಡ ಅಧ್ಯಯನ ಪೀಠ, ಹಾಗೂ ಡಾ.ಬಿ.ಆರ್. ಅಂಬೇಡಕರ ಅಧ್ಯಯನ ಪೀಠ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ. ವಿಜ್ಞಾನ ವಿಷಯಗಳಿಗೆ ಸಂಬಂಧಿಸಿದ ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗಳನ್ನು ವಿಶ್ವಚೇತನ ಕಟ್ಟಡ,(ಪರೀಕ್ಷಾ ವಿಭಾಗ) ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಹಾಗೂ ಸಮಾಜ ವಿಜ್ಞಾನ, ವ್ಯವಹಾರ ಅಧ್ಯಯನ ಹಾಗೂ ಶಿಕ್ಷಣಶಾಸ್ತ್ರ ವಿಷಯಗಳಿಗೆ ಸಂಬಂಧಿಸಿದಂತೆ ಪರೀಕ್ಷೆಗಳನ್ನು ವಿದ್ಯಾಸೌಧ ಕಟ್ಟಡ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಜರುಗಿಸಲು ನಿರ್ಧರಿಸಲಾಗಿರುತ್ತದೆ.

2. ಕಾರಣ ಸಂಬಂಧಿಸಿದ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು ತಮ್ಮ ತಮ್ಮ ವಿಭಾಗಗಳಲ್ಲಿ ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಈ ಮಾಹಿತಿಯನ್ನು ತಿಳಿಸಿ, ಸದರ ವಿದ್ಯಾರ್ಥಿಗಳ ಹಾಜರಾತಿ ಸಂಖ್ಯೆಗಳನ್ನು ಎಂಟು ಸಂಖ್ಯೆಗಳ ಕ್ರಮಾಂಕಗಳಂತೆ ಅಂದರೆ **20250001, 20250002** ರಂತೆ ನಮೂದಿಸಿ ಕುಲಸಚಿವರು(ಮೌಲ್ಯಮಾಪನ), ಸಿಸ್ಟಮ್ ಅನಾಲಿಸ್ಟ್ ಗಣಕಯಂತ್ರ ವಿಭಾಗಕ್ಕೆ ತಪ್ಪದೇ ಸಲ್ಲಿಸಲು ಸೂಚಿಸಲಾಗಿದೆ.

3. ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗೆ ನೀಡಲಾಗುವ ಓ.ಎಂ.ಆರ್.ಉತ್ತರ ಪತ್ರಿಕೆಗಳಲ್ಲಿ ಕಪ್ಪು ಶಾಹಿ ಅಥವಾ ನೀಲಿ ಶಾಹಿ ಬಾಲ್ ಪೆನ್‌ಗಳಿಂದ ಮಾತ್ರ ಉತ್ತರವನ್ನು ನಮೂದಿಸಲು ಸೂಚಿಸಲಾಗಿದೆ.

4. ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಸರಳ ಕ್ಯಾಲ್ಕುಲೇಟರ್‌ಗಳನ್ನು ಮಾತ್ರ ಬಳಸಬೇಕೆಂದು ಸೂಚಿಸಲಾಗಿದೆ.

5. ಪಿ.ಎಚ್.ಡಿ. ಪ್ರವೇಶ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಆಯಾ ವಿಷಯವಾರು ವಿಭಾಗದಿಂದ ಹಾಲ್ ಟಿಕೇಟ್‌ಗಳನ್ನು ನೀಡಲು ಸೂಚಿಸಲಾಗಿದೆ.

6. ಎಲ್ಲ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರ ಗಮನಕ್ಕೆ ತರಬಯಸುವುದೇನೆಂದರೆ, ತಮ್ಮ ವಿಭಾಗದಲ್ಲಿ ಪಿ.ಎಚ್.ಡಿ. ಪ್ರವೇಶ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳ ಯಾದಿಯನ್ನು ವಿಷಯವಾರು ಮುಖ್ಯ ಅಧೀಕ್ಷಕರಿಗೆ (Soft Copy) ಮತ್ತು (Hard Copy) ಯನ್ನು ದಿನಾಂಕ: 03.09.2025 ರೊಳಗಾಗಿ ತಲುಪಿಸಲು ಸೂಚಿಸಲಾಗಿದೆ.

7. ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಪಿ.ಎಚ್.ಡಿ. ಪ್ರವೇಶ ಪರೀಕ್ಷೆ ಜರುಗುವ ದಿನಾಂಕದಂದು ಪರೀಕ್ಷೆ ಪ್ರಾರಂಭವಾಗುವ 30 ನಿಮಿಷಗಳ ಮುಂಚೆ ಸೂಚಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಹಾಜರಿರಲು ಸೂಚಿಸಲಾಗಿದೆ.

8. ದಿನಾಂಕ:12.09.2025 ರಂದು ಜರುಗಲಿರುವ ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗಳು ಮುಕ್ತಾಯವಾಗುವವರೆಗೆ ಸಂಬಂಧಿಸಿದ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು ಹಾಗೂ ಸಂಬಂಧಿಸಿದ ಪ್ರಾಧ್ಯಾಪಕರು ತಮ್ಮ ತಮ್ಮ ವಿಭಾಗಗಳಲ್ಲಿ ಹಾಜರಿರಲು ಸೂಚಿಸಲಾಗಿದೆ. ಕಾರಣ ಸಂಬಂಧಿಸಿದ ವಿಷಯಗಳ ಪ್ರಶ್ನೆ ಪತ್ರಿಕೆಗಳಲ್ಲಿ ವಿದ್ಯಾರ್ಥಿಗಳಿಗೆ ಏನಾದರು ಸಂದೇಹಗಳು ಉದ್ಭವಿಸಿದಲ್ಲಿ ತಮ್ಮನ್ನು ಸಂಪರ್ಕಿಸಿ ಮಾಹಿತಿ ಪಡೆಯಲು ವಿದ್ಯಾರ್ಥಿಗಳಿಗೆ ಸೂಚಿಸಲಾಗುವುದು.

9. ಮಾನ್ಯ ಕುಲಪತಿಗಳ ಆದೇಶದ ಮೇರೆಗೆ ಪಿ.ಎಚ್.ಡಿ. ಪ್ರವೇಶ ಪರೀಕ್ಷೆಗಳನ್ನು ಜರುಗಿಸಲು ಈ ಕೆಳಗಿನಂತೆ ಮುಖ್ಯ ಅಧೀಕ್ಷಕರನ್ನು ನೇಮಿಸಲಾಗಿದ್ದು, ಸದರ ಅಧೀಕ್ಷಕರು ಪರೀಕ್ಷೆಗಳನ್ನು ಸುವ್ಯಸ್ಥಿತವಾಗಿ ಹಾಗೂ ಕಟ್ಟುನಿಟ್ಟಾಗಿ ಜರುಗಿಸಲು ಅವಶ್ಯಕವಿರುವ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ಪರೀಕ್ಷೆಗಳನ್ನು ಜರುಗಿಸಲು ಸೂಚಿಸಲಾಗಿದೆ. ಅಧೀಕ್ಷಕರಿಗೆ ಹಾಗೂ ನಿಯೋಜನೆಗೊಂಡ ಸಿಬ್ಬಂದಿಗಳಿಗೆ ವಿಶ್ವವಿದ್ಯಾಲಯದ ನಿಯಮಾನುಸಾರ ಭತ್ಯೆಗಳನ್ನು ಮಂಜೂರು ಮಾಡಲಾಗುವುದು.

| ಅ.ನಂ. | ಮುಖ್ಯ ಅಧೀಕ್ಷಕರು | ನಿಖಾಯ | ಸ್ಥಳ | ಸಮಯ |
|---|---|---|---|---|
| 1 | ಡಾ. (ಶ್ರೀಮತಿ). ಚಂದ್ರಮ್ಮಾ ಎಮ್, ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯ ವಿಭಾಗ, ಕ.ವಿ.ವಿ. ಧಾರವಾಡ. | ಸಮಾಜ ವಿಜ್ಞಾನ ನಿಖಾಯ ವ್ಯವಹಾರ ಅಧ್ಯಯನ ಶಿಕ್ಷಣಶಾಸ್ತ್ರ ಹಾಗೂ ದೈಹಿಕ ಶಿಕ್ಷಣ | ವಿದ್ಯಾಸೌಧ ಕಟ್ಟಡ, ಕ.ವಿ.ವಿ ಧಾರವಾಡ. | 2 ರಿಂದ 4 |
| 2 | ಡಾ. ಮನೋಜ ಡೊಳ್ಳಿ, ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗ, ಕ.ವಿ.ವಿ. ಧಾರವಾಡ. | ವಿಜ್ಞಾನ ನಿಖಾಯ | ವಿಶ್ವಚೇತನ ಕಟ್ಟಡ, ಪರೀಕ್ಷಾ ವಿಭಾಗ, ಕ.ವಿ.ವಿ ಧಾರವಾಡ. | 2 ರಿಂದ 4 |
| 3 | ಡಾ. ಆರ್.ಎಫ್. ಭಜಂತ್ರಿ, ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ವಿಭಾಗ, ಕ.ವಿ.ವಿ. ಧಾರವಾಡ. | ಕಲಾ, ವಾಣಿಜ್ಯ ಹಾಗೂ ಕಾನೂನು ನಿಖಾಯ | ಡಾ.ಆರ್.ಸಿ. ಹಿರೇಮಠ, ಕನ್ನಡ ಅಧ್ಯಯನ ಪೀಠ, ಹಾಗೂ ಡಾ.ಬಿ.ಆರ್. ಅಂಬೇಡಕರ ಅಧ್ಯಯನ ಪೀಠ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ. | 2 ರಿಂದ 4 |

ಕುಲಸಚಿವರು(ಮೌಲ್ಯಮಾಪನ)

ಗೆ,

1. ಎಲ್ಲ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜಕರಿಗೆ,
2. ಡಾ.(ಶ್ರೀಮತಿ).ಚಂದ್ರಮ್ಮ ಎಮ್, ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯ ವಿಭಾಗ. ಕ.ವಿ.ವಿ. ಧಾರವಾಡ.
3. ಡಾ.ಮನೋಜ ಡೊಳ್ಳಿ, ಪ್ರಾದ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗ, ಕ.ವಿ.ವಿ. ಧಾರವಾಡ.
4. ಡಾ. ಆರ್.ಎಫ್.ಭಜಂತ್ರಿ, ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ವಿಭಾಗ. ಕ.ವಿ.ವಿ. ಧಾರವಾಡ.

ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:

1. ವಿತ್ತಾಧಿಕಾರಿಗಳು, ಕ.ವಿ.ವಿ. ಧಾರವಾಡ.
2. ಉಪಕುಲಸಚಿವರು, ವಿದ್ಯಾಮಂಡಳ ವಿಭಾಗ, ಕ.ವಿ.ವಿ. ಧಾರವಾಡ.
3. ಉಪಕುಲಸಚಿವರು/ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.
4. ಸಿಸ್ಟಮ್ ಅನಾಲಿಸ್ಟ್ಗಣಕಯಂತ್ರ ವಿಭಾಗ, ಕ.ವಿ.ವಿ. ಧಾರವಾಡ.
5. ಅಧೀಕ್ಷಕರು, ಪ್ರಶ್ನೆ ಪತ್ರಿಕೆ /ಸಾಮಾನ್ಯ ಆಡಳಿತ/ ಸ್ನಾತಕೋತ್ತರ ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.
6. ಮಾನ್ಯ ಕುಲಪತಿಗಳು/ಕುಲಸಚಿವರು/ಕುಲಸಚಿವರು(ಮೌಲ್ಯಮಾಪನ) ಇವರ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
7. ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ವಿಭಾಗ, ಕ.ವಿ.ವಿ. ಧಾರವಾಡ.